ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ ನ್ಯಾಯಾಲಯ

ಚನ್ನಗಿರಿ .

ಸಿಸಿ ನಂ**. 17/2021**

ಹೆಸರುಃ ವೀರೇಂದ್ರ ಚಾಸಾಃ 2

ತಂದೆಃ ಸತ್ಯ ನಾರಾಯಣ ಪ್ರಾಸಾಃ 2

ವಯಸ್ಸುಃ 42 ವರ್ಷ

ಉದ್ಯೋಗಃ ವ್ಯವಸಾಯ

ವಾಸ ಸ್ಥಳಃ ಚಿರಡೋಣಿ ಗ್ರಾಮ, ಚನ್ನಗಿರಿ ತಾಲ್ಲೂಕು

ಸಾಕ್ಷಿಗೆ ದಿನಾಂಕಃ 13-11-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ನಾನು ಕೆಲವು ವರ್ಷಗಳ ಹಿಂದೆ ಕೆಲಸದ ನಿಮಿತ್ತ ಠಾಣೆಗೆ ಹೋದಾಗ ಪೊಲೀಸರು ಕೆಲವು ದಾಖಲೆ ಮೇಲೆ ನನ್ನ ಸಹಿ ಪಡೆದಿರುತ್ತಾರೆ. ಅದರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೊಲೀಸರ ಕೋರಿಕೆ ಮೇರೆಗೆ ಸಹಿ ಮಾಡಿರುತ್ತೇನೆ ಎಂದು ಸಹಿ ಮಾಡಿರುತ್ತೇನೆ ಎಂದು ಸಾಕ್ಷಿಯು ಸ್ಥಳ ಪಂಚನಾಮೆಯ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿಕೊಂಡಿದ್ದು, ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿ 2 ಎಂದು ಗುರುತಿಸಲಾಗಿದ್ದು ಹಾಗೂ ಸಾಕ್ಷಿಯ ಸಹಿಯನ್ನು **2(ಬಿ)** ಎಂದು ಗುರುತಿಸಲಾಯಿತು. ಪಂಚನಾಮೆ ಕಾಲಕ್ಕೆ 1 ಭಾವಚಿತ್ರವನ್ನು ತೆಗೆದಿದ್ದು ಸದರಿ ಭಾವ ಚಿತ್ರವನ್ನು ಈಗಾಗಲೇ ನಿಪಿ 3 ಎಂದು ಗುರುತಿಸಲಾಗಿದೆ. ನಾನುಯಾವುದೇ ಹೇಳಿಕೆ ಮತ್ತು ಮರುಹೇಳಿಕೆಯನ್ನು ನೀಡಿರುವುದಿಲ್ಲ. ನಾನು ಆರೋಪಿಯನ್ನು ನೋಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಮಹಜರ್, ಹೇಳಿಕೆ ಮತ್ತು ಮರುಹೇಳಿಕೆಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿಃ 02.06.2019 ರಂದು ಚಾಸಾ 1ರವರು ತೋರೀಸಿದ ಸ್ಥಳದಲ್ಲಿ ಚಾಸಾ 2 ಮತು 3 ರವರ ಸಮಕ್ಷಮ ಮದ್ಯಾಹ್ನ 1.00 ರಿಂದ 1.45 ರವರೆಗೆ ಮಹಜರ್ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಜೊತೆ ಚಾಸಾ 1, 3 ರವರು ನಿಪಿ 2 ಕ್ಕೆ ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ.

ದಿಃ 02.06.2019 ರಂದು ತನಿಖಾಧಿಕಾರಿಗಳಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು **ನಿಪಿ 6** ಎಂದು ಗುರುತಿಸಲಾಯಿತು.

ದಿಃ 18.08.2019 ರಂದು ತನಿಖಾಧಿಕಾರಿಗಳಿಗೆ ಮರುಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು **ನಿಪಿ 7** ಎಂದು ಗುರುತಿಸಲಾಯಿತು. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು - ಆರೋಪಿತರ ಪರ ವಕೀಲರಿಂದ – ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಪಡಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ, ಚನ್ನಗಿರಿ.**